DFA/884822

**<u>ಕರ್ನಾಟಕ ವಿಧಾನ ಪರಿಷತ್ತು</u>**

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 56 |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಎಂ ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತರಿಸಬೇಕಾದ ದಿನಾಂಕ | 12/09/2022 |
| 4 | ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದ ಜಿಲ್ಲೆಗೊಂದರಂತೆ ಮೆಡಿಕಲ್ ಕಾಲೇಜು ಪ್ರಾರಂಭ ಮಾಡುವುದಾಗಿ ಕೇಂದ್ರ ಸರ್ಕಾರ ಘೋಷಿಸಿದ್ದು, ಈ ವಿಚಾರದಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ರಾಜ್ಯದ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಹಂತ ಹಂತವಾಗಿ ಒದಗಿಸುವುದು ಸರ್ಕಾರದ ನೀತಿಯಾಗಿರುತ್ತದೆ. ಪ್ರಸುತ್ತ ರಾಜ್ಯದಲ್ಲಿ ಒಟ್ಟು 21 ಸರ್ಕಾರಿ ವೈದ್ಯಕೀಯ ಕಾಲೇಜುಗಳು, 02 ಇ.ಎಸ್.ಐ ಕಾಲೇಜುಗಳು ಹಾಗೂ 02 ದಂತ ಕಾಲೇಜುಗಳು ಇರುತ್ತವೆ. ಜಿಲ್ಲಾವಾರು ವಿವರಗಳನ್ನು <u>ಅನುಬಂಧ</u> ದಲ್ಲಿರಿಸಿದೆ.<br>ರಾಜ್ಯದಲ್ಲಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತಿನ (NMC) ನಿಯಮಗಳನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗುತ್ತಿದೆ. ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ.<br>ಪ್ರಸ್ತುತ ರಾಜ್ಯ ಸರ್ಕಾರದ ವತಿಯಿಂದ ಚಿತ್ರದುರ್ಗ ಜಿಲ್ಲೆಯಲ್ಲಿ 150 ಎಂಬಿಬಿಎಸ್ ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಸದರಿ ಕಾಲೇಜನ್ನು 2023-24 ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಇಸಿ/ಎಫ್‌ಸಿ ನೀಡಲಾಗಿರುತ್ತದೆ. ಪ್ರಸುತ ಕೇಂದ್ರದ ನೀತಿ ಆಯೋಗದನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಲಾಗಿದ್ದು, ಪ್ರಾಥಮಿಕವಾಗಿ ದಾವಣಗೆರೆ, ಉಡುಪಿ, ಕೋಲಾರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ ಐಡೆಕ್ ಸಂಸ್ಥೆಯ ಸಹಯೋಗದೊಂದಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುತ್ತಿದೆ. |
| ಆ) | ಎಷ್ಟು ಜಿಲ್ಲೆಗಳಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ: (ಪಟ್ಟಿ ಒದಗಿಸುವುದು) | |
| ಇ) | ಮೆಡಿಕಲ್ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಮೆಡಿಕಲ್ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರದ ಮುಂದಿರುವ ಯೋಜನೆಯೇನು? | |

ಸಂಖ್ಯೆ: ಎಂಇಡಿ 522 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ
ಶಿಕ್ಷಣ ಸಚಿವರು



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 08/09/2022 03:49 PM

ಅನುಬಂಧ

| ಕ್ರ.ಸಂ | ಜಿಲ್ಲೆಗಳು | ವೈದ್ಯಕೀಯ ಕಾಲೇಜಿನ ಹೆಸರು |
|---|---|---|
| 1. | ಬೆಂಗಳೂರು ನಗರ | ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, |
| 2. | ಬೆಂಗಳೂರು ನಗರ | ಶ್ರೀ ಅಟಲ್ ಬಿಹಾರಿ ವಾಜಪೇಯಿ ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ |
| 3. | ಬೆಂಗಳೂರು ನಗರ | ಇಎಸ್‌ಐಸಿ ವೈದ್ಯಕೀಯ ಕಾಲೇಜು |
| 4. | ಬೆಂಗಳೂರು ನಗರ | ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ. |
| 5. | ಬೆಳಗಾವಿ | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 6. | ಬಳ್ಳಾರಿ | ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 7. | ಬಳ್ಳಾರಿ | ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ. |
| 8. | ಬೀದರ್ | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 9. | ಚಾಮರಾಜನಗರ | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 10. | ಚಿಕ್ಕಬಳ್ಳಾಪುರ | ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ. |
| 11. | ಹುಬ್ಬಳ್ಳಿ | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 12. | ಗದಗ | ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 13. | ಕಲಬುರಗಿ | ಇಎಸ್‌ಐಸಿ ವೈದ್ಯಕೀಯ ಕಾಲೇಜು |
| 14. | ಕಲಬುರಗಿ | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 15. | ಹಾಸನ | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 16. | ಕೊಡಗು | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 17. | ಕೊಪ್ಪಳ | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 18. | ಮಂಡ್ಯ | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 19. | ಮೈಸೂರು | ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, |
| 20. | ರಾಯಚೂರು | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 21. | ಶಿವಮೊಗ್ಗ | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 22. | ಉತ್ತರ ಕನ್ನಡ | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 23. | ಯಾದಗಿರಿ | ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 24. | ಹಾವೇರಿ | ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |
| 25. | ಚಿಕ್ಕಮಗಳೂರು | ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ. |



Generated from eOffice by DR K SUDHAKAR, MED-MIN(SK), MINISTER, MEDICAL EDUCATION SEC on 08/09/2022 03:49 PM